# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 743

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 23.07.2024

ಉತ್ತರಿಸುವವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಎರಡು ವರ್ಷಗಳಲ್ಲಿ ದಾವಣಗೆರೆಯ ಜಗಳೂರು ವಿಧಾನ ಸಭಾ ಕ್ಷೇತ್ರಕ್ಕೆ ರಾಜ್ಯ ಮತ್ತು ಜಿಲ್ಲಾ ಖನಿಜ ಅಭಿವೃದ್ಧಿ ನಿಧಿಯಿಂದ ಒದಗಿಸಿರುವ ಅನುದಾನವೆಷ್ಟು? (ವರ್ಷವಾರು ವಿವರ ನೀಡುವುದು) | ಕಳೆದ ಎರಡು ವರ್ಷಗಳಲ್ಲಿ ಜಗಳೂರು ವಿಧಾನ ಸಭಾ ಕ್ಷೇತ್ರಕ್ಕೆ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್, ದಾವಣಗೆರೆಯಿಂದ ಒಟ್ಟು ರೂ. 12.25 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ. ವರ್ಷವಾರು ವಿವರ ಈ ಕೆಳಗಿನಂತಿದೆ. (see table below) |
| ಆ) | ದಾವಣಗೆರೆಯ ಜಗಳೂರು ವಿಧಾನ ಸಭಾ ಕ್ಷೇತ್ರದ ಹುಚ್ಚಂಗಿಪುರ ಗ್ರಾಮದಲ್ಲಿ ರಾಜ್ಯ ಮತ್ತು ಜಿಲ್ಲಾ ಖನಿಜ ಅಭಿವೃದ್ಧಿ ನಿಧಿಯಿಂದ ಒದಗಿಸಿರುವ ಅನುದಾನದ ಮೂಲಕ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳಾವುವು; (ವಿವರ ನೀಡುವುದು) | ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್, ದಾವಣಗೆರೆ ವತಿಯಿಂದ ಹುಚ್ಚಂಗಿಪುರ ಗ್ರಾಮದಲ್ಲಿ ಯಾವುದೇ ಕಾಮಗಾರಿಗಳನ್ನು ಕೈಗೊಂಡಿರುವುದಿಲ್ಲ. |
| ಇ) | ರಾಜ್ಯ ಮತ್ತು ಜಿಲ್ಲಾ ಖನಿಜ ಅಭಿವೃದ್ಧಿ ನಿಧಿಯಿಂದ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬಹುದು? (ವಿವರ ನೀಡುವುದು) | ಭಾರತ ಸರ್ಕಾರವು ದಿನಾಂಕ: 12.01.2015 ರಿಂದ ಅನ್ವಯವಾಗುವಂತೆ ಎಂಎಂ(ಡಿ&ಆರ್) ಕಾಯ್ದೆಗೆ ತಿದ್ದುಪಡಿ ಮಾಡಿರುತ್ತದೆ. ಸದರಿ ತಿದ್ದುಪಡಿ ಕಾಯ್ದೆಯ ಕಲಂ 9B ಅಡಿ ಗಣಿ ಬಾಧಿತ ಪ್ರದೇಶಗಳ ಅಭಿವೃದ್ಧಿ ಹಾಗೂ ಜನರ ಕಲ್ಯಾಣಕ್ಕಾಗಿ ಜಿಲ್ಲಾ ಖನಿಜ ಪ್ರತಿಷ್ಠಾನ ಎಂಬ ಲಾಭರಹಿತ ಟ್ರಸ್ಟ್‌ನ್ನು ಎಲ್ಲಾ ಜಿಲ್ಲೆಗಳಲ್ಲಿ ಸ್ಥಾಪಿಸಲಾಗಿರುತ್ತದೆ. |

| ಕ್ರ. ಸಂ | ವರ್ಷ | ಕ್ರಿಯಾ ಯೋಜನೆ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | 2021-22 | 12.25 |
| 2 | 2022-23 | 0 |
| | **ಒಟ್ಟು** | **12.25** |

| | | |
|---|---|---|
| | | DMFT-2016 ರ ನಿಯಮ 18(2) ರಂತೆ ಡಿಎಂಎಫ್ ನಿಧಿಯಲ್ಲಿ ಸಂಗ್ರಹಿಸಿದ ಒಟ್ಟು ಮೊತ್ತದಲ್ಲಿ ಶೇ.10 ರಷ್ಟು ಮೊತ್ತವನ್ನು ಎಂಡೋಮೆಂಟ್ ಗಾಗಿ ಹಾಗೂ ಶೇ.5 ರಷ್ಟು ಮೊತ್ತವನ್ನು ಆಡಳಿತಾತ್ಮಕ ವೆಚ್ಚಕ್ಕಾಗಿ ಕಾಯ್ದಿರಿಸಿ ಉಳಿದ ಶೇ.85 ರಲ್ಲಿ 60:40 ಅನುಪಾತದಂತೆ ಗಣಿ ಬಾಧಿತ ಪ್ರದೇಶಗಳಲ್ಲಿ ಈ ಕೆಳಕಂಡ ಅಭಿವೃದ್ಧಿ ಯೋಜನೆಗಳಿಗೆ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ಸಭೆಯ ಅನುಮೋದನೆಯಂತೆ ಡಿ.ಎಂ.ಎಫ್ ನಿಧಿಯನ್ನು ವಿನಿಯೋಗಿಸಲಾಗುತ್ತಿದೆ.<br><br>ಶೇಕಡ 60ರ ಅನುಪಾತದಲ್ಲಿ ಕೈಗೊಳ್ಳಬೇಕಾದ ಯೋಜನಾ ವಲಯಗಳು:<br><br>1) ಕುಡಿಯುವ ನೀರು<br>2) ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣದ ಅಳತೆ<br>3) ಆರೋಗ್ಯ<br>4) ಶಿಕ್ಷಣ<br>5) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಂಬಂಧ ಕಾರ್ಯಕ್ರಮ<br>6) ಹಿರಿಯ ನಾಗರೀಕರ ಮತ್ತು ವಿಕಲಚೇತನರ ಕಲ್ಯಾಣ.<br>7) ಕೌಶಲ್ಯ ಅಭಿವೃದ್ಧಿ<br>8) ನೈರ್ಮಲ್ಯತೆ.<br><br>ಶೇಕಡ 40ರ ಅನುಪಾತದಲ್ಲಿ ಕೈಗೊಳ್ಳಬೇಕಾದ ಯೋಜನಾ ವಲಯಗಳು:<br><br>1) ಭೌತಿಕ ಮೂಲಸೌಕರ್ಯ<br>2) ನೀರಾವರಿ<br>3) ಇಂಧನ ಮತ್ತು ಜಲಾನಯನ ಅಭಿವೃದ್ಧಿ<br>4) ಪರಿಸರದ ಗುಣಮಟ್ಟ ಹೆಚ್ಚಿಸುವುದು. |

**ಸಂಖ್ಯೆ: ಸಿಐ 129 ಎಂಎಂಎಂ 2024**

S. S. Mallikarjun

**(ಎಸ್.ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂವಿಜ್ಞಾನ ಹಾಗೂ**
**ತೋಟಗಾರಿಕೆ ಸಚಿವರು**